ಊ) ತೇರದಾಳ ನಗರದಲ್ಲಿ ಈಗಾಗಲೇ ಪ್ರಾಥಮಿಕ ಆರೋಗ್ಯ ಕೇಂದ್ರವಿದ್ದು ಪಟ್ಟಣವನ್ನು ಒಳಗೊಂಡಂತೆ 57,000 ಜನಸಂಖ್ಯೆಗೆ ಆರೋಗ್ಯ ಸೌಲಭ್ಯಗಳನ್ನು ಒದಗಿಸುತ್ತದೆ ಮಾರ್ಗಸೂಚಿ ಪ್ರಕಾರ ಮೇಲ್ದರ್ಜೆಗೇರಿಸಲು ಪರಿಶೀಲಿಸಲಾಗುವುದು

ಋ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಸಲುವಾಗಿ ಖಾಯಂ ಆಗಿ 500 ವೈದ್ಯಾಧಿಕಾರಿಗಳನ್ನು ಎರಡು ಹಂತಗಳಲ್ಲಿ ವಿಶೇಷ ನೇಮಕಾತಿ ನಿಯಮಗಳ ಅಡಿ ಭರ್ತಿ ಮಾಡಲು ಅನುಮತಿ ನೀಡಿದ್ದು, ಇದರಲ್ಲಿ ಮೊದಲ ಹಂತವಾಗಿ 250 ವೈದ್ಯರ ಹುದ್ದೆಗಳನ್ನು ಭರ್ತಿ ಮಾಡಲು ನೇಮಕಾತಿ ಪ್ರಕ್ರಿಯೆ ಅಂತಿಮ ಹಂತದಲ್ಲಿದೆ ಆಯ್ಕೆ ಪಟ್ಟಿ ಪ್ರಕಟಿಸಿದ ನಂತರ 2ನೇ ಹಂತದಲ್ಲಿ 250 ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ತೆಗೆದುಕೊಳ್ಳಲಾಗುವುದು ಹಾಗೆಯೇ 2807 ಖಾಲಿ ಇರುವ ಅರೆ–ವೈದ್ಯಕೀಯ ಸಿಬ್ಬಂದಿಗಳನ್ನು ಭರ್ತಿ ಮಾಡುವ ಸಲುವಾಗಿ ವಿಶೇಷ ನೇರ ನೇಮಕಾತಿ ಸಮಿತಿಯ ಮುಖಾಂತರ ಅರ್ಜಿ ಆಹ್ವಾನಿಸಲಾಗಿದ್ದು, ನೇಮಕಾತಿ ಪ್ರಕ್ರಿಯೆ ಚಾಲನೆಯಲ್ಲಿದೆ ಪ್ರಕ್ರಿಯೆ ಪೂರ್ಣಗೊಂಡ ನಂತರ ಖಾಲಿ ಹುದ್ದೆಗಳನ್ನು ಆದ್ಯತೆಯ ಮೇರೆಗೆ ತುಂಬಲಾಗುವುದು

ಇದಲ್ಲದೆ ಗುತ್ತಿಗೆ ಆಧಾರದ ಮೇಲೆ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳನ್ನು ನೇಮಕ ಮಾಡಿಕೊಳ್ಳಲು ಜಿಲ್ಲಾಧಿಕಾರಿಗಳಿಗೆ ಅಧಿಕಾರ ನೀಡಲಾಗಿದೆ

874 ಶ್ರೀ ಸಿದ್ದು ಸಾವದಿ (ಜಮಖಂಡಿ) ಮಾನ್ಯ ಕಾರ್ಮಿಕ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಜಮಖಂಡಿ ತಾಲ್ಲೂಕಿನಲ್ಲಿರುವ ಅಲ್ಪಸಂಖ್ಯಾತರ ಸಂಖ್ಯೆ ಎಷ್ಟು?

ಆ) ಯಾವ ಯಾವ ಸಮುದಾಯದವರನ್ನು ಅಲ್ಪಸಂಖ್ಯಾತರೆಂದು ಕರೆಯಲಾಗುವುದು (ಪ್ರತ್ಯೇಕವಾಗಿ ಅಂಕಿ ಅಂಶಗಳನ್ನು ಒದಗಿಸುವುದು)?

ಇ) ಯಾವ ಯಾವ ಸಮುದಾಯದ ಜನರಿಗೆ ಇಲಾಖೆಯಿಂದ ದಿನಾಂಕ 01 04 2004 ರಿಂದ ಇಲ್ಲಿಯವರೆಗೆ ಒದಗಿಸಲಾಗಿರುವ ವಿವಿಧ ಸೌಲಭ್ಯಗಳಾವುವು? (ಮಾಹಿತಿ ಒದಗಿಸುವುದು)?

ಈ) ತಾಲ್ಲೂಕಿನಲ್ಲಿ ಅನೇಕ ಪಟ್ಟಣಗಳಲ್ಲಿರುವ ಐತಿಹಾಸಿಕ ಮಸೀದಿಗಳನ್ನು ಮತ್ತು ಬಸ್ತಿಗಳ ಜೀರ್ಣೋದ್ಧಾರಕ್ಕೆ ಅನುದಾನ ಅವಶ್ಯಕತೆ ಇದ್ದು, ಯಾವಾಗ ಮಂಜೂರು ಮಾಡಲಾಗುವುದು?

ಉ) ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ ಯಾವ ಯಾವ ಯೋಜನೆಗಳನ್ನು ಹಾಕಿಕೊಳ್ಳಲಾಗಿದೆ?

ಶ್ರೀ ಇಕ್ಬಾಲ್ ಅನ್ಸಾರಿ (ಕಾರ್ಮಿಕ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು)

ಅ) ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ ಒಟ್ಟು

ಆ) 51851 190 21196 217 24 73478

ಆ)

	ರಾಜ್ಯದ ಜನಸಂಖ್ಯೆ (ಲಕ್ಷಗಳಲ್ಲಿ)
ಮುಸ್ಲಿಂ	64 93
ಕ್ರಿಶ್ಚಿಯನ್	10 09
ಜೈನ್	4 13
ಪಾರ್ಸಿ	–
ಸಿಖ್	0 15
ಬೌದ್ಧರು	3 93
ಒಟ್ಟು	**82 93**

ಇ) ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಹಾಗೂ ಬೌದ್ಧ ಸಮುದಾಯದವರಿಗೆ ಈ ಇಲಾಖೆಯಿಂದ ಈ ಕೆಳಕಂಡ ಸೌಲಭ್ಯಗಳನ್ನು ಒದಗಿಸಲಾಗಿದೆ

1 ಹೊಸ ಮೊರಾರ್ಜಿ ದೇಸಾಯಿ ನಿವಾಸಿ ಶಾಲೆಗಳು

2 ಅಲ್ಪಸಂಖ್ಯಾತರಿಗಾಗಿ ಕೌಶಲ್ಯ ಅಭಿವೃದ್ಧಿ ಯೋಜನೆ

3 ಸರ್ಕಾರಿ ಅಲ್ಪಸಂಖ್ಯಾತರಿಗಾಗಿ ಕೌಶಲ್ಯ ಅಭಿವೃದ್ಧಿ ಯೋಜನೆ ಕಲಿಕೆ ಸಾಧನಗಳು

4 ಅನುದಾನಿತ ಅಲ್ಪಸಂಖ್ಯಾತ ಸಂಸ್ಥೆ ಆಧುನಿಕ ವಿಷಯಗಳ ಬಗ್ಗೆ ಶಿಕ್ಷಣ

5 ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಉತ್ತೇಜನ

6 ಅಲ್ಪಸಂಖ್ಯಾತರಿಗಾಗಿ ಸಮೂಹ ವಸತಿ ನಿರ್ಮಾಣದ ಯೋಜನೆ

7 ಅಲ್ಪಸಂಖ್ಯಾತರಿಗಾಗಿ ಕಾನೂನು ಪದವೀಧರರಿಗೆ ಶಿಷ್ಯವೇತನ

8 ಅಲ್ಪಸಂಖ್ಯಾತರಿಗಾಗಿ ಹಾಸ್ಟೆಲ್‌ಗಳು, ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ಹಾಸ್ಟೆಲ್‌ಗಳು

9 ಅಲ್ಪಸಂಖ್ಯಾತರ ಐಟಿಐ/ಡಿಪ್ಲೋಮಾ ವಿದ್ಯಾರ್ಥಿಗಳಿಗೆ ಶಿಷ್ಯವೇತನ

10 ಅಲ್ಪಸಂಖ್ಯಾತರ ಸಂಸ್ಥೆಗಳಿಂದ ನಡೆಸಲ್ಪಡುತ್ತಿರುವ ವಿದ್ಯಾರ್ಥಿ ನಿಲಯಗಳು

11 ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು

12 ಅಲ್ಪಸಂಖ್ಯಾತರಿಗಾಗಿ ವೃತ್ತಿ ತರಬೇತಿ

13 ಅಲ್ಪಸಂಖ್ಯಾತರಿಗಾಗಿ ಅನಾಥಾಲಯಗಳು

ಈ) ತಾಲ್ಲೂಕಿನ ವಕ್ಫ್ ಸಂಸ್ಥೆಗಳಿಗೆ ಈ ಕೆಳಕಂಡಂತೆ ಸಹಾಯಧನ ಮಂಜೂರು ಮಾಡಲಾಗಿದೆ

ವರ್ಷ	ಸಹಾಯಧನ	ವಕ್ಫ್ಸ	ಸಂಸ್ಥೆ ಸಂಖ್ಯೆ
2003–04	ರೂ 30,000	1 ಖುಬ್ಬಾ	ಮಸೀದಿ, ಜಮಖಂಡಿ
2004–05	ರೂ 20,000	1 ಮುಸ್ಲಿಂ	ಸ್ಮಶಾನ, ರಬಕವಿ
2005–06	ಇಲ್ಲ	–	
2006–07	ಇಲ್ಲ	–	

ಉ) 1 ಹೊಸ ಮೊರಾರ್ಜಿ ದೇಸಾಯಿ ನಿವಾಸಿ ಶಾಲೆಗಳು

2 ಅಲ್ಪಸಂಖ್ಯಾತರಿಗಾಗಿ ಕೌಶಲ್ಯ ಅಭಿವೃದ್ಧಿ ಯೋಜನೆ

3 ಸರ್ಕಾರಿ ಅಲ್ಪಸಂಖ್ಯಾತರ ಶಾಲೆಗಳಿಗೆ ಶಿಕ್ಷಣ ಮತ್ತು ಕಲಿಕೆ ಸಾಧನಗಳು

4 ಅನುದಾನಿತ ಅಲ್ಪಸಂಖ್ಯಾತರ ಸಂಸ್ಥೆ ಆಧುನಿಕ ವಿಷಯಗಳ ಬಗ್ಗೆ ಶಿಕ್ಷಣ

5 ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಉತ್ತೇಜನ

6 ಅಲ್ಪಸಂಖ್ಯಾತರಿಗಾಗಿ ಸಮೂಹ ವಸತಿ ನಿರ್ಮಾಣದ ಯೋಜನೆ

7 ಅಲ್ಪಸಂಖ್ಯಾತರಿಗಾಗಿ ಕಾನೂನು ಪದವೀಧರರಿಗೆ ಶಿಷ್ಯವೇತನ

8 ಅಲ್ಪಸಂಖ್ಯಾತರಿಗಾಗಿ ಹಾಸ್ಟೆಲ್‌ಗಳು, ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ಹಾಸ್ಟೆಲ್‌ಗಳು

9 ಅಲ್ಪಸಂಖ್ಯಾತರ ಐಟಿಐ/ಡಿಪ್ಲೋಮಾ ವಿದ್ಯಾರ್ಥಿಗಳಿಗೆ ಶಿಷ್ಯವೇತನ

10 ಅಲ್ಪಸಂಖ್ಯಾತರ ಸಂಸ್ಥೆಗಳಿಂದ ನಡೆಸಲ್ಪಡುತ್ತಿರುವ ವಿದ್ಯಾರ್ಥಿ ನಿಲಯಗಳು

11 ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು

12 ಅಲ್ಪಸಂಖ್ಯಾತರಿಗಾಗಿ ವೃತ್ತಿ ತರಬೇತಿ

ಅಲ್ಪಸಂಖ್ಯಾತರಿಗಾಗಿ ಅನಾಥಾಲಯಗಳು

640 (709) ಶ್ರೀ ಸಿಂಧೂರ ಜಿ. ರಾಜಶೇಖರ (ಶಿಗ್ಗಾಂವ್) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ ಕಿಮ್ಸ್ ಆಸ್ಪತ್ರೆಯಲ್ಲಿ ಈಗಾಗಲೇ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ವಸತಿ ಗೃಹಗಳ ತೊಂದರೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಹುಬ್ಬಳ್ಳಿ ಕಿಮ್ಸ್ ಆಸ್ಪತ್ರೆಯಲ್ಲಿ ಈ ಹಿಂದೆ ಕರ್ತವ್ಯ ನಿರ್ವಹಿಸುತ್ತಿದ್ದ ಆಗಿನ ನಿರ್ದೇಶಕರು ಹಾಗೂ ಆಗಿನ ಇನ್‌ಚಾರ್ಜ್ ಎಸ್ಟೇಟ್ ಆಫೀಸರ್‌ರವರು ಇವರಿಬ್ಬರಿಗೂ ಸುಮಾರು 6 ತಿಂಗಳುಗಳ ಹಿಂದೆ ವರ್ಗಾವಣೆಯಾಗಿ, ವರ್ಗಾವಣೆಯಾದ ಸ್ಥಳಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ ಅವರು ಕಿಮ್ಸ್ ಆಸ್ಪತ್ರೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ ತೆಗೆದುಕೊಂಡಿದ್ದ ವಸತಿ ಗೃಹ ಖಾಲಿ ಮಾಡದೇ ಅನಧಿಕೃತವಾಗಿ ತಮ್ಮ ಅಧೀನದಲ್ಲಿ ಇಟ್ಟುಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ, ಕಿಮ್ಸ್ ಆಸ್ಪತ್ರೆಯ ವಸತಿ ಗೃಹಗಳನ್ನು ಅನಧಿಕೃತವಾಗಿ ತಮ್ಮ ಅಧೀನದಲ್ಲಿ ಇಟ್ಟುಕೊಂಡಿರುವುದನ್ನು ತೆರವುಗೊಳಿಸಿ ಇವರ ಮೇಲೆ ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಎ.ಎಸ್. ಆಚಾರ್ಯ (ವೈದ್ಯಕೀಯ ಶಿಕ್ಷಣ ಸಚಿವರು)

ಅ) – ಹೌದು –

ಆ) ಕಿಮ್ಸ್‌ನ ಹಿಂದಿನ ನಿರ್ದೇಶಕರು ಮತ್ತು ಎಸ್ಟೇಟ್ ಆಫೀಸರ್ ರವರು ಕ್ರಮವಾಗಿ ದಿನಾಂಕ 23–11–2007 ಮತ್ತು 30–09–2006 ರಂದು ವಸತಿ ಗೃಹವನ್ನು ಖಾಲಿ ಮಾಡಿ ಸ್ವಾಧೀನವನ್ನು ಈಗಾಗಲೇ ಸಂಸ್ಥೆಗೆ ವಹಿಸಿರುತ್ತಾರೆ

ಇ) – ಉದ್ಭವಿಸುವುದಿಲ್ಲ –